ಕರ್ನಾಟಕ ಸರ್ಕಾರ

# ಕಾಲೇಜು ಶಿಕ್ಷಣ ಇಲಾಖೆ

ದೂರವಾಣಿ: 080-22343904/05

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:26.05.2016

## ಸೂಚನೆ

ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಪ್ರವೇಶಾತಿಯಲ್ಲಿ ಪಾರದರ್ಶಕತೆಯನ್ನು ಕಾಯ್ದುಕೊಳ್ಳಲು ಹಾಗೂ ಕಾಲೇಜುಗಳಲ್ಲಿನ ಕೋರ್ಸ್‌ಗಳ ಲಭ್ಯತೆ, ಪ್ರವೇಶದಲ್ಲಿನ ಗೊಂದಲ ಮತ್ತು ವಿಳಂಬ ನಿವಾರಣೆಗಾಗಿ 2016-17ನೇ ಶೈಕ್ಷಣಿಕ ಸಾಲಿನಲ್ಲಿ ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳಲ್ಲಿ ಪ್ರಥಮ ಪದವಿ ತರಗತಿಗಳ ಪ್ರವೇಶಾತಿ ಪ್ರಕ್ರಿಯೆಯನ್ನು ಸಂಪೂರ್ಣವಾಗಿ ಆನ್‌ಲೈನ್ ಮುಖಾಂತರ ನಡೆಸಲು ಕ್ರಮ ಕೈಗೊಳ್ಳಲಾಗಿದ್ದು, ಅರ್ಹ ವಿದ್ಯಾರ್ಥಿಗಳು ಅಂತರ್ಜಾಲ ತಾಣ **www.dce.kar.nic.in** ದಲ್ಲಿ ಅವರು ಇಚ್ಛಿಸುವ ಕಾಲೇಜಿನ ಕೋರ್ಸ್/ಕಾಂಬಿನೇಷನ್‌ಗೆ ಅರ್ಜಿಯನ್ನು ಸಲ್ಲಿಸಬಹುದಾಗಿದೆ.

### ಮುಖ್ಯಾಂಶಗಳು:

- ಭಾರತದಲ್ಲಿಯೇ ಪ್ರಪ್ರಥಮವಾಗಿ ಕರ್ನಾಟಕ ರಾಜ್ಯದಲ್ಲಿ ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳಲ್ಲಿನ ಪದವಿ ತರಗತಿಗಳಿಗೆ ಆನ್‌ಲೈನ್ ಮೂಲಕ ಪ್ರವೇಶಾತಿ ಪ್ರಕ್ರಿಯೆಯನ್ನು ನಡೆಸಲಾಗುತ್ತಿದೆ.

- ಈ ಆನ್‌ಲೈನ್ ಪ್ರವೇಶಾತಿ ಪ್ರಕ್ರಿಯೆಯನ್ನು ಉನ್ನತ ಶಿಕ್ಷಣ ಇಲಾಖೆ ವ್ಯಾಪ್ತಿಯ ವಿಶ್ವವಿದ್ಯಾಲಯಗಳ ಸಹಕಾರದೊಂದಿಗೆ ಆಯಾ ವಿಶ್ವವಿದ್ಯಾಲಯಗಳ ಪ್ರವೇಶಾತಿ ನಿಯಮಗಳನ್ವಯ ನಡೆಸಲಾಗುತ್ತಿದೆ.

- ಒಬ್ಬ ವಿದ್ಯಾರ್ಥಿಯು ಒಂದೇ ಅರ್ಜಿಯ ಮೂಲಕ ರಾಜ್ಯದ ಯಾವುದೇ ಸರ್ಕಾರಿ ಅಥವಾ ಖಾಸಗಿ ಅನುದಾನಿತ ಕಾಲೇಜುಗಳಲ್ಲಿ ತಾನು ಇಚ್ಛಿಸಿದ ವಿವಿಧ ಪದವಿ ಕೋರ್ಸು/ಕಾಂಬಿನೇಷನ್‌ಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ.

- ವಿದ್ಯಾರ್ಥಿಯು ಯಾವುದೇ ಶುಲ್ಕವಿಲ್ಲದೆ ತಾನು ಇಚ್ಛಿಸುವ ಕಾಲೇಜುಗಳಲ್ಲಿನ ಕೋರ್ಸ್/ಕಾಂಬಿನೇಷನ್‌ಗಳಿಗೆ ಒಂದೇ ಅರ್ಜಿಯನ್ನು ಆನ್‌ಲೈನ್ ಮೂಲಕ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

- ವಿದ್ಯಾರ್ಥಿಗಳು/ಪೋಷಕರು ಬೇರೆ ಬೇರೆ ಸ್ಥಳಗಳಲ್ಲಿರುವ ವಿವಿಧ ಕಾಲೇಜುಗಳಿಗೆ ಭೇಟಿ ನೀಡಿ, ವಿವಿಧ ಕೋರ್ಸುಗಳಿಗೆ ಅರ್ಜಿಯನ್ನು ಪಡೆಯುವ ಅವಶ್ಯಕತೆ ಇರುವುದಿಲ್ಲ. ಇದರಿಂದಾಗಿ ವಿದ್ಯಾರ್ಥಿ/ಪೋಷಕರ ಹಣ ಮತ್ತು ಸಮಯದ ಉಳಿತಾಯವಾಗುತ್ತದೆ.

- ವಿದ್ಯಾರ್ಥಿಗಳು ವಿವಿಧ ಕಾಲೇಜುಗಳಿಗೆ ಖುದ್ದಾಗಿ ಭೇಟಿ ನೀಡದೆ, ಅವರು ಇಚ್ಛಿಸುವ ಕಾಲೇಜು, ಕೋರ್ಸ್/ಕಾಂಬಿನೇಷನ್‌ಗಳ ವಿವರಗಳನ್ನು ಅಂತರ್ಜಾಲ ತಾಣ **www.dce.kar.nic.in** ದಿಂದ ನೇರವಾಗಿ ಪಡೆದುಕೊಳ್ಳಬಹುದು.

. . . . . . 2

- ಈ ಆನ್‌ಲೈನ್ ಪ್ರವೇಶಾತಿ ಪ್ರಕ್ರಿಯೆಯಲ್ಲಿ ಪದವಿಪೂರ್ವ ಶಿಕ್ಷಣ ಇಲಾಖೆಯಿಂದ ಪ್ರಕಟಗೊಂಡಿರುವ ದ್ವಿತೀಯ ಪಿ.ಯು.ಸಿ. ಫಲಿತಾಂಶದ ದತ್ತಾಂಶವನ್ನು ನೇರವಾಗಿ ಬಳಸಿಕೊಳ್ಳಲಾಗಿದೆ.

- ಹೊರ ರಾಜ್ಯದ ವಿದ್ಯಾರ್ಥಿಗಳೂ ಸಹ ಕರ್ನಾಟಕದಲ್ಲಿ ವಿದ್ಯಾಭ್ಯಾಸ ಮಾಡಲು ಬಯಸಿದಲ್ಲಿ ಅಂತಹ ವಿದ್ಯಾರ್ಥಿಗಳಿಗೆ ಈ ಆನ್‌ಲೈನ್ ಪ್ರವೇಶ ಪ್ರಕ್ರಿಯೆಯಿಂದಾಗಿ ಸಾಕಷ್ಟು ಅನುಕೂಲವಾಗಲಿದೆ.

- ಈ ಆನ್‌ಲೈನ್ ಪ್ರವೇಶಾತಿ ಪ್ರಕ್ರಿಯೆನ್ನು ಸಮರ್ಪಕವಾಗಿ ಹಾಗೂ ಯಶಸ್ವಿಯಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳಲ್ಲಿ **Online Admission Help Desk** ಗಳನ್ನು ಪ್ರಾರಂಭಿಸಲು ಪ್ರಾಂಶುಪಾಲರುಗಳಿಗೆ ಸೂಚನೆ ನೀಡಲಾಗಿದೆ.

- ಈ ಆನ್‌ಲೈನ್ ಪ್ರವೇಶಾತಿ ಪ್ರಕ್ರಿಯೆಯ ಬಗ್ಗೆ ಹೆಚ್ಚಿನ ಮಾಹಿತಿಗಾಗಿ ಇ-ಮೇಲ್ ವಿಳಾಸ **dceadmission2015@gmail.com** ಅಥವಾ ಕೇಂದ್ರ ಕಛೇರಿಯ **Online Admission Help Desk** ನ್ನು ದೂರವಾಣಿ ಸಂಖ್ಯೆ:**080-22389459, 9449863941, 9449863960, 9448587079** ಗಳ ಮೂಲಕ ಸಂಪರ್ಕಿಸಬಹುದು.

ಕಾಲೇಜು ಶಿಕ್ಷಣ ಆಯುಕ್ತರು